**Akashvani : Bangalore**

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

**19.08.2024 / 14.30 hrs**

<u>ಮುಖ್ಯಾಂಶಗಳು</u>

**೧. ಮುಡಾ ಪ್ರಕರಣ; ಪ್ರಾಸಿಕ್ಯೂಷನ್‌ಗೆ ಅನುಮತಿ ನೀಡಿರುವ ರಾಜ್ಯಪಾಲರ ಕ್ರಮ ಪ್ರಶ್ನಿಸಿ ಹೈಕೋರ್ಟ್‌ಗೆ ಮುಖ್ಯಮಂತ್ರಿ ಸಿದ್ಧರಾಮಯ್ಯ ರಿಟ್ ಅರ್ಜಿ**

**೨. ಮುಖ್ಯಮಂತ್ರಿ ಸ್ಥಾನಕ್ಕೆ ಸಿದ್ಧರಾಮಯ್ಯ ರಾಜೀನಾಮೆಗೆ ಒತ್ತಾಯಿಸಿ ಎನ್‌ಡಿಎ ಮೈತ್ರಿಕೂಟ ಪ್ರತಿಭಟನೆ**

**೩. ರಾಜ್ಯಪಾಲರ ನಿಲುವು ಖಂಡಿಸಿ ರಾಜ್ಯಾದ್ಯಂತ ಕಾಂಗ್ರೆಸ್ ಧರಣಿ**

**೪. ಇಂದು ರಕ್ಷಾಬಂಧನ; ಸಹೋದರರಿಗೆ ರಾಖಿ ಕಟ್ಟಿ ಸಂಭ್ರಮಿಸಿದ ಸಹೋದರಿಯರು**

**<><*<><>*><>**

ಮುಡಾ ನಿವೇಶನ ಹಗರಣದಲ್ಲಿ ತಮ್ಮ ವಿರುದ್ಧ ರಾಜ್ಯಪಾಲರು ದಾವೆ ಹೂಡಲು ನೀಡಿರುವ ಅನುಮತಿಯನ್ನು ಪ್ರಶ್ನಿಸಿ, ಮುಖ್ಯಮಂತ್ರಿ ಸಿದ್ಧರಾಮಯ್ಯ ಹೈಕೋರ್ಟ್ ಮೊರೆ ಹೋಗಿದ್ದಾರೆ. ರಾಜ್ಯಪಾಲರ ನಿರ್ಧಾರವನ್ನು ರದ್ದುಪಡಿಸುವಂತೆ ಅವರು, ಹೈಕೋರ್ಟ್‌ಗೆ ರಿಟ್ ಅರ್ಜಿ ಸಲ್ಲಿಸಿದ್ದಾರೆ. ಈ ಕುರಿತಾದ ಮನವಿಯನ್ನು ತುರ್ತಾಗಿ ಕೈಗೆತ್ತಿಕೊಳ್ಳುವಂತೆ ನ್ಯಾಯಾಲಯಕ್ಕೆ ತಮ್ಮ ವಕೀಲರ ಮೂಲಕ ಮನವಿ ಮಾಡಿದ್ದಾರೆ.

**<><*<><>*><>**

ಮುಡಾ ಪ್ರಕರಣದಲ್ಲಿ ತಮ್ಮ ವಿರುದ್ಧ ಪ್ರಾಸಿಕ್ಯೂಷನ್ ಗೆ ರಾಜ್ಯಪಾಲರು ಅನುಮತಿ ನೀಡಿದ್ದನ್ನು ಪ್ರಶ್ನಿಸಿ ಹೈಕೋರ್ಟ್ ನಲ್ಲಿ ರಿಟ್ ಅರ್ಜಿ ಸಲ್ಲಿಸಲಾಗಿದ್ದು, ನ್ಯಾಯಾಲಯದಲ್ಲಿ ಪರಿಹಾರ ಸಿಗುವ ಸಂಪೂರ್ಣ ವಿಶ್ವಾಸವಿದೆ ಎಂದು ಮುಖ್ಯಮಂತ್ರಿ ಸಿದ್ಧರಾಮಯ್ಯ ಹೇಳಿದ್ದಾರೆ. ಈ ಕುರಿತು ಸಾಮಾಜಿಕ ಜಾಲತಾಣದಲ್ಲಿ ಪೋಸ್ಟ್ ಮಾಡಿರುವ ಅವರು, ರಿಟ್ ಅರ್ಜಿಯಲ್ಲಿ ಮಧ್ಯಂತರ ಪರಿಹಾರವಾಗಿ ಪ್ರಾಸಿಕ್ಯೂಷನ್‌ಗೆ ತಡೆಯಾಜ್ಞೆ ನೀಡಬೇಕೆಂದು ಕೋರಲಾಗಿದೆ. ಈ ರಿಟ್ ಅರ್ಜಿಯ ಬಗ್ಗೆ ವಕೀಲರಾದ ಅಭಿಷೇಕ್ ಮನು ಸಿಂಗ್ವಿಯವರು ವಾದ ಮಂಡಿಸಲಿದ್ದಾರೆ ಎಂದು ತಿಳಿಸಿದ್ದಾರೆ. ರಾಜಭವನವನ್ನು ಬಳಸಿಕೊಂಡು ಕರ್ನಾಟಕ ಬಿಜೆಪಿ, ಜೆಡಿಎಸ್ ಹಾಗೂ ಕೇಂದ್ರ ಸರ್ಕಾರ, ತಮ್ಮ ವಿರುದ್ಧ ಷಡ್ಯಂತ್ರ ಮಾಡಿವೆ. ಬಿಜೆಪಿಯವರು ದುರುದ್ದೇಶದಿಂದ ಪ್ರತಿಭಟನೆ ಮಾಡುತ್ತಿದ್ದು, ರಾಜಕೀಯವಾಗಿ ಇದನ್ನು ಎದುರಿಸುತ್ತೇವೆ. ಇದರ ವಿರುದ್ಧ ಕಾನೂನು ಹಾಗೂ ರಾಜಕೀಯ ಹೋರಾಟ ನಡೆಸುವುದಾಗಿ ಮುಖ್ಯಮಂತ್ರಿ ಸಿದ್ಧರಾಮಯ್ಯ ಹೇಳಿದ್ದಾರೆ.

**<><*<><>*><>**

ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರ-ಮುಡಾ ಬಿಡಿ ನಿವೇಶನಗಳ ಹಂಚಿಕೆ ಹಗರಣದಲ್ಲಿ ಮುಖ್ಯಮಂತ್ರಿ ಸಿದ್ಧರಾಮಯ್ಯ ರಾಜೀನಾಮೆಗೆ ಆಗ್ರಹಿಸಿ ಇಂದು ಬಿಜೆಪಿ ಮತ್ತು ಜೆಡಿಎಸ್ ಒಳಗೊಂಡ ಎನ್‌ಡಿಎ ಮಿತ್ರ ಪಕ್ಷಗಳು ಪ್ರತಿಭಟನೆ ನಡೆಸುತ್ತಿವೆ. ವಿಧಾನಸೌಧ ಮತ್ತು ವಿಕಾಸಸೌಧದ ನಡುವೆ ಇರುವ ಮಹಾತ್ಮಾಗಾಂಧಿ ಪ್ರತಿಮೆ ಮುಂಭಾಗ ಉಭಯ ಪಕ್ಷಗಳ ಮುಖಂಡರು ಪ್ರತಿಭಟನೆಯಲ್ಲಿ ನಿರತರಾಗಿದ್ದಾರೆ. ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ, ವಿಧಾನಸಭೆಯ ಪ್ರತಿಪಕ್ಷ ನಾಯಕ ಆರ್. ಅಶೋಕ, ವಿಧಾನಪರಿಷತ್ ವಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ, ಜೆಡಿಎಸ್ ಮುಖಂಡ ಟಿ.ಎ. ಸರವಣ ಮತ್ತಿತರ ಮುಖಂಡರು ಪ್ರತಿಭಟನೆಯಲ್ಲಿ ಭಾಗವಹಿಸಿದ್ದಾರೆ. ಈ ಸಂದರ್ಭದಲ್ಲಿ ಬಿ.ವೈ. ವಿಜಯೇಂದ್ರ ಮಾತನಾಡಿ, ಮುಡಾ ನಿವೇಶನ ಹಗರಣದಲ್ಲಿ ಮುಖ್ಯಮಂತ್ರಿ ರಾಜೀನಾಮೆ ನೀಡುವವರೆಗೆ ಹೋರಾಟ ನಿಲ್ಲುವುದಿಲ್ಲ. ನಮ್ಮ ಹೋರಾಟ ಮತ್ತಷ್ಟು ತೀವ್ರಗೊಳ್ಳುತ್ತದೆ ಎಂದು ಎಚ್ಚರಿಕೆ ನೀಡಿದರು. ಬಿಜೆಪಿ ಮಾಜಿ ರಾಷ್ಟ್ರೀಯ ಪ್ರಧಾನಕಾರ್ಯದರ್ಶಿ ಸಿ.ಟಿ. ರವಿ ಮಾತನಾಡಿ, ಮುಖ್ಯಮಂತ್ರಿಯವರಿಗೆ ಸಂವಿಧಾನದ ಬಗ್ಗೆ ನಂಬಿಕೆ ಇದ್ದರೆ ಕೂಡಲೇ ನೈತಿಕ ಹೊಣೆ ಹೊತ್ತು ರಾಜೀನಾಮೆ ನೀಡಬೇಕು ಎಂದು ಆಗ್ರಹಿಸಿದರು. ಜೆಡಿಎಸ್ ಮುಖಂಡ ಟಿ.ಎ. ಶರವಣ ಮಾತನಾಡಿ, ಸಿದ್ಧರಾಮಯ್ಯ ಅವರ ವಿರುದ್ಧ, ಎನ್‌ಡಿಎ ಮೈತ್ರಿಕೂಟ ತನ್ನ ಹೋರಾಟವನ್ನು ರಾಷ್ಟ್ರ ಮಟ್ಟಕ್ಕೆ ಕೊಂಡೊಯ್ಯಲಿದೆ

ಎಂದು ತಿಳಿಸಿದರು. ಈ ಮಧ್ಯೆ ಆಡಳಿತಾ ರೂಢ ಕಾಂಗ್ರೆಸ್ ಕೂಡ ಪ್ರತಿಭಟನೆ ಹಮ್ಮಿಕೊಂಡಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯ ವಿರುದ್ಧ ಪ್ರಾಸಿಕ್ಯೂಷನ್‌ಗೆ ಅನುಮತಿ ನೀಡಿರುವ ರಾಜ್ಯಪಾಲರ ನಡೆಯ ವಿರುದ್ಧ ಇಂದು ಕಾಂಗ್ರೆಸ್ ರಾಜ್ಯ ವ್ಯಾಪಿ ಪ್ರತಿಭಟನೆಗೆ ಕರೆ ನೀಡಿದೆ. ಬೆಂಗಳೂರಿನ ಫ್ರೀಡಂ ಪಾರ್ಕ್‌ನಲ್ಲಿ ಕಾಂಗ್ರೆಸ್ ಪ್ರತಿಭಟನೆ ನಡೆಸುತ್ತಿದ್ದು, ರಾಜ್ಯದ ವಿವಿಧ ಜಿಲ್ಲಾ ಕೇಂದ್ರಗಳಲ್ಲಿ ಪ್ರತಿಭಟನೆ ಹಮ್ಮಿಕೊಂಡಿದೆ. ರಾಜ್ಯಪಾಲರ ನಡೆ ವಿರುದ್ಧ ರಾಜ್ಯಾದ್ಯಂತ ಕಾಂಗ್ರೆಸ್ ನಾಯಕರು, ಮುಖಂಡರು, ಕಾರ್ಯಕರ್ತರು ಬೀದಿಗಿಳಿದು ಪ್ರತಿಭಟನೆ ನಡೆಸುತ್ತಿದ್ದಾರೆ.

**<><*<><>*><>**

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ವಿರುದ್ಧ ಪ್ರಾಸಿಕ್ಯೂಷನ್ ಗೆ ಅನುಮತಿ ನೀಡಿರುವ ರಾಜ್ಯಪಾಲರ ಕ್ರಮವನ್ನು ಖಂಡಿಸಿ, ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೇವನಹಳ್ಳಿಯಲ್ಲಿ ಕಾಂಗ್ರೆಸ್ ಪಕ್ಷದ ವತಿಯಿಂದ ಪ್ರತಿಭಟನಾ ಮೆರವಣಿಗೆ ನಡೆಸಿ, ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಲಾಯಿತು. ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಕೆ.ಎಚ್.ಮುನಿಯಪ್ಪ ಮಾತನಾಡಿ, ಮುಖ್ಯಮಂತ್ರಿ ಸಿದ್ದರಾಮಯ್ಯ ವಿರುದ್ಧ ಪ್ರಾಸಿಕ್ಯೂಷನ್‌ಗೆ ಅನುಮತಿ ನೀಡಿರುವ ರಾಜ್ಯಪಾಲರ ಧೋರಣೆ, ಖಂಡನೀಯವಾಗಿದ್ದು, ರಾಜ್ಯಪಾಲರ ಕ್ರಮದ ವಿರುದ್ಧ ಕಾನೂನು ಹೋರಾಟ ನಡೆಸುತ್ತೇವೆ. ಈ ವಿಚಾರದಲ್ಲಿ ಮುಖ್ಯಮಂತ್ರಿಗಳು ರಾಜೀನಾಮೆ ನೀಡುವ ಪ್ರಶ್ನೆಯೇ ಇಲ್ಲ. ಕಾಂಗ್ರೆಸ್ ವರಿಷ್ಠರ ಆದಿಯಾಗಿ ಎಲ್ಲಾ ಶಾಸಕರು, ಮುಖಂಡರು ಮುಖ್ಯಮಂತ್ರಿಗಳ ಬೆಂಬಲಕ್ಕೆ ನಿಂತಿದ್ದೇವೆ ಎಂದರು. ರಾಜ್ಯಪಾಲರ ಈ ಕ್ರಮ ಅಸಂವಿಧಾನಿಕ, ರಾಜಕೀಯ ಪ್ರೇರಿತ ಹಾಗೂ ದುರುದ್ದೇಶಪೂರಿತ ಎಂದು ರಾಜ್ಯ ಉನ್ನತ ಶಿಕ್ಷಣ ಸಚಿವ ಹಾಗೂ ಚಿಕ್ಕಬಳ್ಳಾಪುರ ಉಸ್ತುವಾರಿ ಸಚಿವ ಡಾ.ಎಂ.ಸಿ.ಸುಧಾಕರ್ ವಾಗ್ದಾಳಿ ನಡೆಸಿದ್ದಾರೆ. ಚಿಕ್ಕಬಳ್ಳಾಪುರ ಜಿಲ್ಲಾ ಕೇಂದ್ರದಲ್ಲಿ ಕಾಂಗ್ರೆಸ್ ಪಕ್ಷದ ಜಿಲ್ಲಾ ಘಟಕ ಹಮ್ಮಿಕೊಂಡಿದ್ದ ರಾಜ್ಯಪಾಲರ ವಿರುದ್ಧದ ಪ್ರತಿಭಟನಾ ಮೆರವಣಿಗೆಗೆ ಚಾಲನೆ ನೀಡಿ ಅವರು ಮಾತನಾಡಿದರು. ಪ್ರಜಾಪ್ರಭುತ್ವದಲ್ಲಿ ಬಹುಮತದೊಂದಿಗೆ ಆಯ್ಕೆಯಾಗಿರುವ ಸರ್ಕಾರವೊಂದನ್ನು ಬಿಜೆಪಿ ಮತ್ತು ಜೆಡಿಎಸ್ ಷಡ್ಯಂತ್ರದ ಮೂಲಕ ಅಸ್ಥಿರಗೊಳಿಸಲು ಮುಂದಾಗಿವೆ. ಸಿದ್ದರಾಮಯ್ಯ ಅವರ ಹೆಸರಿಗೆ ಮಸಿ ಬಳಿಯಲು ಎರಡೂ ಪಕ್ಷಗಳು ಹೊರಟಿವೆ. ಸಾಂವಿಧಾನಿಕ ಹುದ್ದೆಯಲ್ಲಿರುವ ರಾಜ್ಯಪಾಲರು ಇದಕ್ಕೆ ಬೆನ್ನೆಲುಬಾಗಿರುವುದು ಖಂಡನೀಯ ಎಂದು ದೂರಿದರು. ಪ್ರತಿಭಟನಾ ಮೆರವಣಿಗೆಯಲ್ಲಿ ಮಾಜಿ ಸಚಿವ ಕೆ.ಎಂ.ಮುನಿಯಪ್ಪ, ಕಾಂಗ್ರೆಸ್ ಜಿಲ್ಲಾಧ್ಯಕ್ಷ ಕೆ.ಎನ್. ಕೇಶವರೆಡ್ಡಿ ಮತ್ತಿತರರು ಹಾಜರಿದ್ದರು. ಕೋಲಾರ ಜಿಲ್ಲೆಯಲ್ಲಿ ಕಾಂಗ್ರೆಸ್‌ನ ಶಾಸಕರು ಹಾಗೂ ಕಾರ್ಯಕರ್ತರು ಪ್ರತಿಭಟನೆ ನಡೆಸಿದರು. ಜಿಲ್ಲಾ ಕಾಂಗ್ರೆಸ್ ಕಚೇರಿಯಿಂದ ಮೆಕ್ಕೆ ವೃತ್ತದವರೆಗೂ ಪಾದಯಾತ್ರೆ ನಡೆಸಿ, ಬಿಜೆಪಿ ನಾಯಕರು ಹಾಗೂ ರಾಜ್ಯಪಾಲರ ವಿರುದ್ಧ ಘೋಷಣೆ ಕೂಗಿದರು. ನಂತರ ರಾಷ್ಟ್ರಪತಿಯವರಿಗೆ ನೇರವಾಗಿ ಇ-ಮೇಲ್ ಮೂಲಕ ಹಾಗೂ ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಿದರು. ಪ್ರತಿಭಟನೆಯಲ್ಲಿ ಕೋಲಾರ ಶಾಸಕ ಕೊತ್ತೂರು ಮಂಜುನಾಥ್, ಮಾಲೂರು ಶಾಸಕ ಕೆ.ವೈ.ನಂಜೇಗೌಡ, ವಿಧಾನ ಪರಿಷತ್ ಸದಸ್ಯರಾದ ನಸೀರ್ ಅಹಮದ್, ಅನಿಲ್ ಕುಮಾರ್, ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಲಕ್ಷ್ಮೀನಾರಾಯಣ, ನೂರಾರು ಕಾಂಗ್ರೆಸ್ ಕಾರ್ಯಕರ್ತರು ಭಾಗವಹಿಸಿದ್ದರು.

**<><*<><>*><>**

ಇಂದು ದೇಶಾದ್ಯಂತ ರಕ್ಷಾ ಬಂಧನ ಆಚರಿಸಲಾಗುತ್ತಿದೆ. ಅಣ್ಣ ತಂಗಿಯರ ನಡುವಿನ ಬಾಂಧವ್ಯದ ಪ್ರತೀಕವಾಗಿರುವ ಈ ಹಬ್ಬದಲ್ಲಿ ಸಹೋದರಿಯರು ಸಹೋದರನಿಗೆ ರಾಖಿ ಕಟ್ಟಿ ದೀರ್ಘಾಯುಷ್ಯಕ್ಕಾಗಿ ಪ್ರಾರ್ಥಿಸಲಿದ್ದಾರೆ. ರಾಷ್ಟ್ರಪತಿ ದ್ರೌಪದಿ ಮುರ್ಮು, ಉಪರಾಷ್ಟ್ರಪತಿ ಜಗದೀಪ್ ಧನ್‌ಕರ್, ಪ್ರಧಾನಿ ನರೇಂದ್ರ ಮೋದಿ, ಮುಖ್ಯಮಂತ್ರಿ ಸಿದ್ದರಾಮಯ್ಯ ಸೇರಿದಂತೆ ಗಣ್ಯರು ದೇಶದ ಜನತೆಗೆ ರಕ್ಷಾ ಬಂಧನದ ಶುಭಾಶಯ ಕೋರಿದ್ದಾರೆ. ರಾಷ್ಟ್ರಪತಿಯವರು ತಮ್ಮ ಸಂದೇಶದಲ್ಲಿ ಇದು ಸಹೋದರ, ಸಹೋದರಿಯರ ನಡುವಿನ ಬಾಂಧವ್ಯದ ಪ್ರತೀಕವಾಗಿದ್ದು, ಪರಸ್ಪರ ಪ್ರೀತಿ, ನಂಬಿಕೆಗಳನ್ನು ಬಲಪಡಿಸುವ ಆಚರಣೆಯಾಗಿದೆ ಎಂದು ತಿಳಿಸಿದ್ದಾರೆ. ಈ ಹಬ್ಬ ಧಾರ್ಮಿಕ ಹಾಗೂ ಸಾಂಸ್ಕೃತಿಕ ಮೇರೆಗಳನ್ನು ಮೀರಿದ್ದಾಗಿದ್ದು, ದೇಶದ ವೈವಿಧ್ಯತೆ ಮತ್ತು ಏಕತೆಯ ದ್ಯೋತಕವಾಗಿದೆ. ಇದು ಮಹಿಳೆಯರ ಹಕ್ಕುಗಳನ್ನು ಸಂರಕ್ಷಿಸುವಲ್ಲಿ ನಮ್ಮ ಬದ್ಧತೆಯನ್ನು ಬಲಪಡಿಸುವ ಹಬ್ಬವಾಗಿದೆ ಎಂದು ರಾಷ್ಟ್ರಪತಿ ದ್ರೌಪದಿ ಮುರ್ಮು ಸಂದೇಶದಲ್ಲಿ ತಿಳಿಸಿದ್ದಾರೆ. ಉಪರಾಷ್ಟ್ರಪತಿ ಜಗದೀಪ್ ಧನ್‌ಕರ್ ದೇಶದ ಜನತೆಗೆ ರಕ್ಷಾಬಂಧನ ಶುಭಾಶಯ ಕೋರಿದ್ದು, ಈ ಹಬ್ಬ ಸಹೋದರ, ಸಹೋದರಿಯರ ನಡುವಿನ ಪವಿತ್ರ ಬಂಧದ ಆಚರಣೆಯಾಗಿದೆ. ಈ ಸಂದರ್ಭದಲ್ಲಿ ಮಹಿಳೆಯರ ಘನತೆ ಮತ್ತು ಗೌರವವನ್ನು ಎತ್ತಿ

ಹಿಡಿಯಲು ಎಲ್ಲರೂ ಬದ್ಧರಾಗಿರಬೇಕು ಎಂದು ತಿಳಿಸಿದರು. ಪ್ರಧಾನಿ ನರೇಂದ್ರ ಮೋದಿ ಎಲ್ಲಾ ನಾಗರಿಕರಿಗೆ ರಕ್ಷಾ ಬಂಧನದ ಶುಭಾಶಯ ಕೋರಿದ್ದು, ಈ ಪವಿತ್ರ ಹಬ್ಬವು ಸಂಬಂಧಗಳಲ್ಲಿ ಮಾಧುರ್ಯ, ಸಂತೋಷ, ಸಮೃದ್ಧಿ ಮತ್ತು ಜನರ ಜೀವನದಲ್ಲಿ ಅದೃಷ್ಟವನ್ನು ತರಲಿ ಎಂದು ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ಹಾರೈಸಿದ್ದಾರೆ.ಸೋದರತೆಯ ಸಂಕೇತವಾದ ರಕ್ಷಾಬಂಧನವು ದ್ವೇಷ, ವೈರುಧ್ಯಗಳನ್ನು ತೊಡೆದು ಪ್ರೀತಿ, ವಿಶ್ವಾಸದ ಬಂಧವು ನಮ್ಮೆಲ್ಲರನ್ನು ಬೆಸೆಯಲು ಪ್ರೇರಣೆಯಾಗಲಿ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಸಾಮಾಜಿಕ ಜಾಲತಾಣದಲ್ಲಿ ಶುಭಕೋರಿದ್ದಾರೆ. ಸಹೋದರ-ಸಹೋದರಿಯರ ನಡುವಿನ ಪವಿತ್ರ ಬಾಂಧವ್ಯದ ಸಂಭ್ರಮಾಚರಣೆಯ ರಕ್ಷಾ ಬಂಧನವನ್ನು ಇಂದು ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ಸಂಭ್ರಮದಿಂದ ಆಚರಿಸಲಾಗುತ್ತಿದೆ.

<><*<><>*><>

ಬೆಂಗಳೂರಿನ ರವೀಂದ್ರ ಕಲಾ ಕ್ಷೇತ್ರದಲ್ಲಿ ಇಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ಶ್ರೀ ನುಲಿಯ ಚಂದಯ್ಯ ಜಯಂತಿಯನ್ನು ಹಮ್ಮಿಕೊಳ್ಳಲಾಗಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಜಯಂತಿ ಕಾರ್ಯಕ್ರಮ ಉದ್ಘಾಟಿಸಲಿದ್ದಾರೆ. ಹಾವೇರಿ ಜಿಲ್ಲಾಡಳಿತ ಭವನದಲ್ಲಿಂದು ಶರಣ ನುಲಿಯ ಚಂದಯ್ಯಯನ್ನು ಆಚರಿಸಲಾಯಿತು. ಜಿಲ್ಲಾಧಿಕಾರಿ ವಿಜಯ ಮಹಾಂತೇಶ ದಾನಮ್ಮನವರ್, ಶ್ರೀ ನುಲಿಯ ಚಂದಯ್ಯ ಅವರ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಿದರು. ಬಳಿಕ  ಮಾತನಾಡಿದ ಅವರು, ನುಲಿಯ ಚಂದಯ್ಯ ಅವರು ೧೨ನೇ ಶತನಮಾನದ ದಾರ್ಶನಿಕ, ಬಸವಾದಿ ಶರಣ ಸಮೂಹದ ವಚನಕಾರರಾಗಿದ್ದು, ತಮ್ಮ ವಚನಗಳ ಮೂಲಕ ಸಮಾಜ ಸುಧಾರಣೆಗೆ ಅತ್ಯುನ್ನತ ಕೊಡುಗೆ ನೀಡಿದ್ದಾರೆ ಎಂದು ಹೇಳಿದರು.

<><*<><>*><>

ಇದೇ ೨೩ ರಂದು ನಡೆಯಲಿರುವ ಮೊದಲ ರಾಷ್ಟ್ರೀಯ ಅಂತರಿಕ್ಷ ದಿನದ ಹಿನ್ನೆಲೆಯಲ್ಲಿ ಬೆಂಗಳೂರಿನ ನೆಹರು ತಾರಾಲಯದಲ್ಲಿ ಅರ್ಥಪೂರ್ಣ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ ಎಂದು ಹಿರಿಯ ಬಾಹ್ಯಾಕಾಶ ವಿಜ್ಞಾನಿ ಹಾಗೂ ನೆಹರು ತಾರಾಲಯ ನಿರ್ದೇಶಕ ಡಾ. ಬಿ.ಆರ್. ಗುರುಪ್ರಸಾದ್ ತಿಳಿಸಿದ್ದಾರೆ. ಅಂತಾರಾಷ್ಟ್ರೀಯ ಅಂತರಿಕ್ಷ ದಿನದ ಹಿನ್ನೆಲೆಯಲ್ಲಿ ಬೆಂಗಳೂರು ಆಕಾಶವಾಣಿ ಸುದ್ದಿವಿಭಾಗಕ್ಕೆ ನೀಡಿದ ವಿಶೇಷ ಸಂದರ್ಶನದಲ್ಲಿ ಅವರು, ಇಡೀ ದಿನ ಚಂದ್ರಯಾನ ಯಶಸ್ಸಿಗೆ ಕಾರಣವಾದ ಹಲವು ಮಹತ್ವದ ಅಂಶಗಳ ಕುರಿತು ವಿದ್ಯಾರ್ಥಿಗಳು ಮತ್ತು ಜನಸಾಮಾನ್ಯರಲ್ಲಿ ಅರಿವು ಮೂಡಿಸಲಾಗುತ್ತಿದೆ. ಚಂದ್ರಯಾನ ಮಾದರಿಗಳನ್ನು ಪ್ರದರ್ಶಿಸುತ್ತಿದ್ದು, ಯಶಸ್ಸಿನ ಸಾಧನೆಗಳನ್ನು ಪ್ರತಿಬಿಂಬಿಸುವ ಬಿತ್ತಿ ಚಿತ್ರಗಳನ್ನು ಸಹ ಪ್ರದರ್ಶಿಸಲಾಗುತ್ತಿದೆ ಎಂದರು. ವಿಶೇಷವಾಗಿ ವಿದ್ಯಾರ್ಥಿಗಳಿಗಾಗಿ ರಸಪ್ರಶ್ನೆ ಕಾರ್ಯಕ್ರಮ, ಆಶುಭಾಷಣ ಹಾಗೂ ಪ್ರಬಂಧ ಸ್ಪರ್ಧೆಗಳನ್ನು ಏರ್ಪಡಿಸಲಾಗಿದೆ ಎಂದು ಹೇಳಿದರು. ಆಕಾಶವಾಣಿಗೆ ಡಾ. ಬಿ.ಆರ್. ಗುರುಪ್ರಸಾದ್ ಅವರು ನೀಡಿರುವ ಸಂದರ್ಶನ ಇಂದು ರಾತ್ರಿ ಬೆಂಗಳೂರು ಆಕಾಶವಾಣಿ ಮೂಲಕ ರಾಜ್ಯದ ಎಲ್ಲಾ ಬಾನುಲಿ ಕೇಂದ್ರಗಳಲ್ಲಿ ೬.೩೦ಕ್ಕೆ ಪ್ರಸಾರವಾಗಲಿದೆ.

<><*<><>*><>

ಮಾಜಿ ರಾಷ್ಟ್ರಪತಿ ಡಾ.ಶಂಕರ್ ದಯಾಳ್ ಶರ್ಮಾ ಅವರ ಜನ್ಮದಿನದ ಅಂಗವಾಗಿ ರಾಷ್ಟ್ರಪತಿ ಭವನದಲ್ಲಿಂದು ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ಪುಷ್ಪ ನಮನ ಸಲ್ಲಿಸಿದರು. ಕಾಂಗ್ರೆಸ್ ಪಕ್ಷದ ಹಿರಿಯ ನಾಯಕ, ಆದರ್ಶ ರಾಜಕಾರಣಿ, ಮಾಜಿ ರಾಷ್ಟ್ರಪತಿ ಶ್ರೀ ಶಂಕರ್ ದಯಾಳ್ ಶರ್ಮಾ ಅವರ ಜನ್ಮದಿನದಂದು ಶತಕೋಟಿ ನಮನಗಳನ್ನು ಸಲ್ಲಿಸುತ್ತೇನೆ. ಶಿಕ್ಷಣ, ನ್ಯಾಯಾಂಗ ಸೇರಿದಂತೆ ಅನೇಕ ಕ್ಷೇತ್ರಗಳಲ್ಲಿ ಅವರು ದೇಶಕ್ಕೆ ನೀಡಿದ ಅನನ್ಯ ಸೇವೆ ಅವಿಸ್ಮರಣೀಯ ಎಂದು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಸಾಮಾಜಿಕ ಜಾಲತಾಣದಲ್ಲಿ ಪೋಸ್ಟ್ ಮಾಡಿದ್ದಾರೆ.

<><*<><>*><>

ಭಾರತ ಚುನಾವಣಾ ಆಯೋಗವು ಅರ್ಹತಾ ದಿನಾಂಕ ಜನವರಿ ೦೧, ೨೦೨೫ ರಂತೆ ಭಾವಚಿತ್ರ ಸಹಿತ ಮತದಾರರ ಪಟ್ಟಿಗಳ ವಿಶೇಷ ಸಂಕ್ಷಿಪ್ತ ಪರಿಷ್ಕರಣೆ-೨೦೨೫ರ ವೇಳಾಪಟ್ಟಿಯನ್ನು ಪ್ರಕಟಿಸಿದ್ದು, ನಾಳೆಯಿಂದ ಮತದಾರರ ಪಟ್ಟಿಯ ವಿಶೇಷ ಸಂಕ್ಷಿಪ್ತ ಪರಿಷ್ಕರಣೆ ನಡೆಯಲಿದೆ ಎಂದು ಕೋಲಾರ ಜಿಲ್ಲಾ ಚುನಾವಣಾಧಿಕಾರಿಯೂ ಆದ ಜಿಲ್ಲಾಧಿಕಾರಿ ಅಕ್ರಂಪಾಷ ತಿಳಿಸಿದ್ದಾರೆ.

<><*<><>*><>

ಆಕಾಶವಾಣಿಯ ದ್ವಿಭಾಷಾ ನೇರ ಫೋನ್ ಇನ್ ಕಾರ್ಯಕ್ರಮ ಪಬ್ಲಿಕ್ ಸ್ಪೀಕ್‌ನಲ್ಲಿ ಇಂದು ರಾತ್ರಿ ೯.೩೦ಕ್ಕೆ '"ಬಾಹ್ಯಾಕಾಶ ಕ್ಷೇತ್ರದಲ್ಲಿ ವಿಸ್ತೃತಗೊಳ್ಳುತ್ತಿರುವ ಅವಕಾಶಗಳು' ವಿಷಯದ ಕುರಿತು ಚರ್ಚೆ ಪ್ರಸಾರವಾಗಲಿದೆ. ದೆಹಲಿಯ ಉತ್ತರ ಪ್ರಾದೇಶಿಕ ದೂರ ಸಂವೇದಿ ಕೇಂದ್ರದ ಉಪ ಮಹಾ ಪ್ರಬಂಧಕ ಡಾ.ಸಮೀರ್ ಸರಣ್ ಚರ್ಚೆಯಲ್ಲಿ ಪಾಲ್ಗೊಳ್ಳಲಿದ್ದಾರೆ. ಕಾರ್ಯಕ್ರಮದ ವೇಳೆ, ಬಾಹ್ಯಾಕಾಶ ಕ್ಷೇತ್ರದಲ್ಲಿನ ವೃತ್ತಿ ಅವಕಾಶಗಳ ಬಗ್ಗೆ ಕೇಳುಗರು ಸ್ಟುಡಿಯೋದಲ್ಲಿ ಉಪಸ್ಥಿತರಿರುವ ತಜ್ಞರನ್ನು ಕೇಳಬಹುದಾಗಿದೆ. ಕೇಳುಗರು ತಮ್ಮ ಪ್ರಶ್ನೆಗಳನ್ನು ದೂರವಾಣಿ ಸಂಖ್ಯೆ ೦೧೧ - ೨೩೪೨೧೦೫೦ ಮತ್ತು ೦೧೧ - ೨೩೩೧೪೪೪೪ ಕ್ಕೆ ಇಂದು ರಾತ್ರಿ ೯.೩೦ಕ್ಕೆ ಕರೆ ಮಾಡಿ ಕೇಳಬಹುದಾಗಿದೆ. ವಾಟ್ಸಾಪ್ ಸಂಖ್ಯೆಯಾದ ೯೨೮೯೦೯೪೦೪೪ಕ್ಕೂ ಕೇಳುಗರು ತಮ್ಮ ಸಂದೇಹಗಳನ್ನು ಕಳಿಸಬಹುದಾಗಿದೆ. ಹಾಗೆಯೇ, hashtag Ask ನೊಂದಿಗೆ ಎಕ್ಸ್ ನಲ್ಲಿ ಪ್ರಶ್ನೆಗಳನ್ನು ಪೋಸ್ಟ್ ಮಾಡಬಹುದಾಗಿದೆ.

**<><*<> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <>*><>**

**<><*<> ನಮ್ಮ ಮುಂದಿನ ನಮ್ಮ ವಾರ್ತಾ ಪ್ರಸಾರ ಸಂಜೆ ೬.೪೦ ಕ್ಕೆ <>*><>**